ದಿನಾಂಕಃ 03-01-2020

ಸಾಕ್ಷಿಯನ್ನು ಇಂದು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು.

ಮುಖ್ಯ ವಿಚಾರಣೆ ವಾದಿ ಪರ ವಕೀಲರಿಂದಃ

ನನ್ನ ಮುಖ್ಯ ವಿಚಾರಣೆಯ ಪ್ರಮಾಣ ಪತ್ರದಲ್ಲಿರುವ ಸಂಗತಿಗಳನ್ನು ನಾನೇ ಹೇಳಿ ಬರೆಯಿಸಿರುತ್ತೇನೆ. ಅದರಲ್ಲಿರುವ ಸಂಗತಿಗಳು ಸತ್ಯವಾಗಿವೆ.

ಜಿ.ಬಿ.ಬಸವರಾಜುರವರ ಶಾಲಾ ದೃಡೀಕರಣ ಪತ್ರವನ್ನು ಹಾಜರುಪಡಿಸಿರುತ್ತೇನೆ. ಸದರಿ ದಾಖಲೆಯನ್ನು ನಿಶಾನೆ ಪಿ 1 ಎಂದು ಗುರುತಿಸಲಾಯಿತು. ಲೀಗಲ್ ನೋಟಿಸ್ ನ ಕಚೇರಿ ಪ್ರತಿಯನ್ನು ಹಾಜರುಪಡಿಸಿರುತ್ತೇನೆ. ಸದರಿ ದಾಖಲೆಯನ್ನು ನಿಶಾನೆ ಪಿ 2 ಎಂದು ಗುರುತಿಸಲಾಯಿತು. ಆರು ಅಂಚೇ ಸ್ವೀಕೃತಿ ರಶೀದಿಗಳನ್ನು ಹಾಜರುಪಡಿಸಿರುತ್ತೇನೆ. ಸದರಿ ದಾಖಲೆಗಳನ್ನು ಕ್ರಮವಾಗಿ ನಿಶಾನೆ ಪಿ3 ರಿಂದ 8 ಎಂದು ಗುರುತಿಸಲಾಯಿತು. ಹಿಂದಿರುಗಿ ಬಂದ ಅಂಚೆ ಲಕೋಟೆಯನ್ನು ಹಾಜರುಪಡಿಸಿರುತ್ತೇನೆ. ಸದರಿ ದಾಖಲೆಯನ್ನು ನಿಶಾನೆ ಪಿ 9 ಎಂದು ಗುರುತಿಸಲಾಯಿತು. ಸದರಿ ಲಕೋಟೆಯನ್ನು ನ್ಯಾಯಾಲಯದಲ್ಲಿ ತೆರೆದು ನೋಡಿದ್ದು ಅದರಲ್ಲಿನ ವಕೀಲರ ನೋಟಿಸ್ ನ ಕಚೇರಿ ಪ್ರತಿಯನ್ನು ನಿಶಾನೆ ಪಿ 9 ಎ ಎಂದು ಗುರುತಿಸಲಾಯಿತು.

ಮುಂದುವರೆದ ಮುಖ್ಯವಿಚಾರಣೆಗೆ ವಕೀಲರು ಕಾಲಾವಕಾಶ ಕೋರಿದ್ದರಿಂದ ಮುಂದುವರೆದ ಮುಖ್ಯವಿಚಾರಣೆಯನ್ನು ಮುಂದೂಡಲಾಯಿತು.

( ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿಕೆಯನ್ನು ನನ್ನ ಉಕ್ತ ಲೇಖನಕ್ಕೆ ಬೆರಳಚ್ಚು ಪಡಿಸಲಾಯಿತು.)

**ಓ.ಹೇ.ಕೇ. ಸರಿ ಇದೆ.**

1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ

ಚನ್ನಗಿರಿ